ದಿನಾಂಕ: 06.08.2021 ರಂದು ಬೆಳಗ್ಗೆ 11.00 ಗಂಟೆಗೆ ಕಾಮಾಕ್ಷಿಪಾಳ್ಯ ವಾರ್ಡ್ ನಂ. 101 ರಲ್ಲಿ ಶ್ರೀ ಎ.ಎಸ್. ರಮೇಶ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡಾವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಎ.ಎಸ್. ರಮೇಶ್, ನೋಡಲ್ ಅಧಿಕಾರಿಗಳು ಹಾಗೂ ಸದಸ್ಯರು
2. ಶ್ರೀ ಪೂಜಾರಪ್ಪ, ಸಹಾಯಕ ಅಭಿಯಂತರರು, ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ
3. ಶ್ರೀಮತಿ ರಾಜೇಶ್ವರಿ, ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀಮತಿ ರೂಪಶ್ರೀ, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ವೆಂಕಟೇಶ್, ಟಿ.ಐ.-101
6. ಶ್ರೀ ಎಂ. ರವೀಂದ್ರನಾಥ್, ಸದಸ್ಯರು
7. ಶ್ರೀ ಮಾರುತಿ, ಸದಸ್ಯರು
8. ಶ್ರೀ ಸುಬ್ರಮಣ್ಯ ಸದಸ್ಯರು

ದಿನಾಂಕ: 07.07.2021 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 06.08.2021ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ ಎಸ್.ಬಿ.ಐ. ಆಫೀರರ್ಸ್ **ಸಮುಧಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ,** ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

ದಿನಾಂಕ: 14.06.2021 ರಂದು ನಡೆದ ಸಭೆಯಲ್ಲಿ ಹಲವಾರು ವಿಷಯಗಳನ್ನು ಚರ್ಚಿಸಿ, ಅದಕ್ಕೆ ಸಂಬಂಧಪಟ್ಟ ವಿಷಯಗಳಿಗೆ ಪರಿಹಾರ ತೆಗೆದುಕೊಳ್ಳಲಾಗಿರುತ್ತದೆ. ಹಾಗು ದಿನಾಂಕ: 07.07.2021ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 101 ಕಾಮಾಕ್ಷಿಪಾಳ್ಯ **ಎಸ್.ಬಿ.ಐ. ಆಫೀರರ್ಸ್ ಸಮುಧಾಯ ಭವನ, ಎಸ್.ಬಿ.ಐ. ಕಾಲೋನಿ, ಬಸವೇಶ್ವರನಗರ, ಕಾಮಾಕ್ಷಿಪಾಳ್ಯ,** ಇಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ಶ್ರೀ ರವೀಂದ್ರನಾಥ್, ಸದಸ್ಯರು, ಕರೇಕಲ್ಲು ಪ್ರದೇಶದಲ್ಲಿ ರಸ್ತೆಯಲ್ಲಿ ಗುಂಡಿ ಬಿದ್ದಿದ್ದು, ಅದಕ್ಕೆ ವಾರ್ಡ್ ಅಭಿಯಂತರರಿಂದಿ ತುರ್ತಾಗಿ ಕೆಲಸ ಕೈಗೊಳ್ಳಲಾಗುವುದೆಂದು ತಿಳಿಸಿದರು.
2. ಸಬ್‌ಲೇನ್ ವತಿಯಿಂದ ಪೈಪ್‌ಗಳನ್ನು ಅಳವಡಿಸುವ ಕಾಮಗಾರಿಯನ್ನು ತುರ್ತಾಗಿ ಮುಗಿಸುವುದಾಗಿ ಹಿಂದಿನ ಸಭೆಯಲ್ಲಿ ತಿಳಿಸಲಾಗಿತ್ತು. ಆದರೆ ಇದುವರೆವಿಗೂ ಕಾಮಗಾರಿಯು ಪೂರ್ಣಗೊಳ್ಳದೆ ಇರುವುದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುವುದಾಗಿ ಶ್ರೀ ಅನಿಲ್ ರಂಗಣ್ಣ, ವಾರ್ಡ್ ಕಮಿಟಿ ಸದಸ್ಯರು ಸಭೆಗೆ ತಿಳಿಸಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಬಿ.ಡಬ್ಲ್ಯೂ.ಎಸ್.ಎಸ್.ಬಿ. ಸಬ್‌ಲೇನ್ ಇಲಾಖೆಯವರಿಗೆ ಆದಷ್ಟು ಬೇಗ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ತಿಳಿಸಲು ವಾರ್ಡ್ ಕಮಿಟಿ ಕಾರ್ಯದರ್ಶಿಗಳಿಗೆ ಸೂಚಿಸಿದರು.
3. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಬ್ಲಾಕ್ ಸ್ಪಾಟ್‌ಗಳಲ್ಲಿ ಕಸವನ್ನು ಹಾಕದಂತೆ ಮತ್ತು ಕಸವನ್ನು ರಸ್ತೆಯಲ್ಲಿ ಹಾಕದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತೆ ಮಾರ್ಷಲ್ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು. ಕ್ರಮ ವಹಿಸಬೇಕೆಂದು ಸಭೆಗೆ ತಿಳಿಸಿದರು.

4. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಕಂದಾಯ ಪರಿವೀಕ್ಷಕರಿಗೆ ವಾರ್ಡಿನಲ್ಲಿ ಬಾಕಿ ಇರುವ ಕಂದಾಯ ವಸೂಲಾತಿಯನ್ನು ಸಮರ್ಪಕವಾಗಿ ವಸೂಲಿ ಮಾಡಿ ಬಿ.ಬಿ.ಎಂ.ಪಿ.ಯ ತೆರಿಗೆಯನ್ನು ಹೆಚ್ಚಿಸಬೇಕೆಂದು ತಿಳಿಸಿದರು.

Scanned by CamScanner

5. ತಿಮ್ಮಯ್ಯ ರಸ್ತೆ, ಮಲ್ಲೇಗೌಡ ರಸ್ತೆ, ಶಿವನಗರ ಮುಖ್ಯ ರಸ್ತೆ, ಪಶ್ಚಿಮ ಕಾರ್ಡ್ ರಸ್ತೆಯಲ್ಲಿರುವ ಕೆಲವು ಮರದ ಕೊಂಬೆಗಳು ಒಣಗಿದ್ದು, ಬೀಳುವ ಸಂಭವವಿರುತ್ತದೆ. ಆದುದರಿಂದ ಒಣಗಿರುವ ಮರದ ಕೊಂಬೆಗಳನ್ನು ತೆರವುಗೊಳಿಸಬೇಕೆಂದು ಕಮಿಟಿ ಸದಸ್ಯರು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಸದರಿ ವಿಷಯದ ಬಗ್ಗೆ ಸಭೆಯಲ್ಲಿ ಹಾಜರಿದ್ದ ಶ್ರೀ ಜಗದೀಶ್.ಟಿ.ಎನ್. DYRFO ರವರು ಸ್ಥಳವನ್ನು ಪರಿಶೀಲಿಸಿ ಕೂಡಲೇ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ

ನೋಡಲ್ ಅಧಿಕಾರಿಗಳು
ವಾರ್ಡ್ ನಂ. 101

Scanned by CamScanner